# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಮಾನ್ಯ ಸದಸ್ಯರ ಹೆಸರು** | : | **ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)** |
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **901** |
| **ಉತ್ತರಿಸಬೇಕಾದ ಸಚಿವರು** | : | **ಕೃಷಿ ಸಚಿವರು** |
| **ಉತ್ತರಿಸಬೇಕಾದ ದಿನಾಂಕ** | : | **14-07-2023** |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಮೈಸೂರು ವಿಭಾಗದಲ್ಲಿ 4 ಪ್ರಮುಖ ಜಲಾಶಯ ಹಾಗೂ ಕೃಷಿಗೆ ಯೋಗ್ಯವಾದ ನೀರಾವರಿ ಜಮೀನು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| (ಆ) | ಮಂಡ್ಯ, ಚಾಮರಾಜನಗರ, ಹಾಸನ ಹಾಗೂ ಮೈಸೂರು ಭಾಗಗಳಲ್ಲಿ 3 ಕೃಷಿ ಕಾಲೇಜು, 10 ಸಂಶೋಧನಾ ಕೇಂದ್ರಗಳು, 3 ತೋಟಗಾರಿಕಾ ಕಾಲೇಜುಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಮಂಡ್ಯ, ಚಾಮರಾಜನಗರ, ಹಾಸನ ಹಾಗೂ ಮೈಸೂರು ಭಾಗಗಳಲ್ಲಿ 3 ಕೃಷಿ ಕಾಲೇಜು, 9 ಸಂಶೋಧನಾ ಕೇಂದ್ರಗಳು, 1 ವಿಸ್ತರಣಾ ಶಿಕ್ಷಣ ಘಟಕ ಮತ್ತು 3 ಕೃಷಿ ವಿಜ್ಞಾನ ಕೇಂದ್ರಗಳು ಹಾಗೂ 1 ತೋಟಗಾರಿಕಾ ಕಾಲೇಜು ಇದೆ. |
| (ಇ) | ಹಾಗಾದಲ್ಲಿ, ಮಂಡ್ಯ ಕೃಷಿ ಮಹಾವಿದ್ಯಾಲಯವು (ವಿ.ಸಿ.ಫಾರಂ) ಒಳಪಟ್ಟಿರುವ ಸುಮಾರು 630 ಎಕರೆ ಭೂ ಪ್ರದೇಶವನ್ನು ಒಳಗೊಂಡಿದ್ದು, ಪದವಿ, ಸ್ನಾತಕೋತ್ತರ ಪದವಿ, ಸಂಶೋಧನೆ ಕಾರ್ಯ ನಡೆಯುವ ಇಲ್ಲಿ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ; | ಮೈಸೂರು ವಿಭಾಗಕ್ಕೆ ಸೇರಿರುವ ಪ್ರದೇಶಗಳಾದಂತಹ ಮಂಡ್ಯ, ಚಾಮರಾಜನಗರ, ಮಡಿಕೇರಿ, ಹಾಸನ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಕೃಷಿ ಹಾಗೂ ಕೃಷಿ ಪೂರಕ ವಿಷಯಗಳ ಬೋಧನೆ, ಸಂಶೋಧನೆ ಹಾಗೂ ವಿಸ್ತರಣಾ ಚಟುವಟಿಕೆಗಳಿಗೆ ಹೆಚ್ಚಿನ ಆದ್ಯತೆ ನೀಡುವ ನಿಟ್ಟಿನಲ್ಲಿ ವಲಯ ಕೃಷಿ ಸಂಶೋಧನಾ ಕೇಂದ್ರ, ವಿ.ಸಿ.ಫಾರಂ, ಮಂಡ್ಯ; ಕೃಷಿ ಮಹಾವಿದ್ಯಾಲಯ, ಮಂಡ್ಯ; ಕೃಷಿ ವಿಜ್ಞಾನ ಕೇಂದ್ರ, ಮಂಡ್ಯ; ಸಾವಯವ ಕೃಷಿ ಸಂಶೋಧನಾ ಕೇಂದ್ರ / ವಿಸ್ತರಣಾ ಶಿಕ್ಷಣ ಘಟಕ, ನಾಗನಹಳ್ಳಿ (ಮೈಸೂರು ಜಿಲ್ಲೆ); ಕೃಷಿ ಮಹಾವಿದ್ಯಾಲಯ, ಹಾಸನ; ಕೃಷಿ ಮಹಾವಿದ್ಯಾಲಯ, ಚಾಮರಾಜನಗರ; ಕೃಷಿ ವಿಜ್ಞಾನ ಕೇಂದ್ರ, ಚಾಮರಾಜನಗರ; ಅಖಿಲ ಭಾರತ ಸುಸಂಘಟಿತ ಸಂಶೋಧನಾ ಪ್ರಾಯೋಜನೆ (ಹತ್ತಿ) ಮತ್ತು ಅಖಿಲ ಭಾರತ ಸುಸಂಘಟಿತ ಸಂಶೋಧನಾ ಪ್ರಾಯೋಜನೆ (ಜೋಳ), ಚಾಮರಾಜನಗರ ಮುಂತಾದ ಸಂಸ್ಥೆಗಳು ಕಾರ್ಯನಿರತವಾಗಿದ್ದು ಸರ್ವತೋಮುಖ ಕೃಷಿ ಅಭಿವೃದ್ಧಿಗೆ ಒತ್ತು ನೀಡುತ್ತಿದೆ. |
| (ಈ) | ಹಾಗಾದಲ್ಲಿ, ಯಾವ ಕಾಲಮಿತಿಯಲ್ಲಿ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲಾಗುವುದು? | |

| | | |
|---|---|---|
| | | ಇದಲ್ಲದೇ ತೋಟಗಾರಿಕಾ ವಿಷಯಗಳಲ್ಲಿ ಬೋಧನೆ, ಸಂಶೋಧನೆ ಹಾಗೂ ವಿಸ್ತರಣೆ ವಿಷಯಗಳಿಗೆ ಹೆಚ್ಚು ಒತ್ತು ನೀಡಲು ತೋಟಗಾರಿಕಾ ಮಹಾವಿದ್ಯಾಲಯ, ಮೈಸೂರು, ಈಗಾಗಲೇ ಕಾರ್ಯನಿರ್ವಹಿಸುತ್ತಿದೆ.<br><br>ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಬರುವ ಕೃಷಿ ಮತ್ತು ಕೃಷಿ ಪೂರಕ ಕಾಲೇಜುಗಳು, ಸಂಶೋಧನಾ ಕೇಂದ್ರಗಳು ಹಾಗೂ ವಿಸ್ತರಣಾ ಘಟಕಗಳು ಮೈಸೂರು ವಿಭಾಗಕ್ಕೆ ತನ್ನದೇ ಆದಂತಹ ಕೊಡುಗೆಗಳನ್ನು ಸತತವಾಗಿ ಹಲವಾರು ದಶಕಗಳಿಂದ ನೀಡುತ್ತಾ ಬಂದಿವೆ. ಆದ್ದರಿಂದ, ವಲಯ ಕೃಷಿ ಸಂಶೋಧನಾ ಕೇಂದ್ರ, ವಿ.ಸಿ.ಫಾರಂ, ಮಂಡ್ಯವು, ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಹೃದಯಭಾಗವೆಂದೇ ಗುರುತಿಸಲ್ಪಟ್ಟಿರುವುದರಿಂದ, ವಿ.ಸಿ.ಫಾರಂ, ಮಂಡ್ಯದಲ್ಲಿ ಹೊಸ ಕೃಷಿ ಹಾಗೂ ತೋಟಗಾರಿಕಾ ವಿಶ್ವವಿದ್ಯಾನಿಲಯವನ್ನು ಪ್ರಾರಂಭಿಸುವ ಅವಶ್ಯಕತೆ ಕಂಡುಬರುತ್ತಿಲ್ಲ. |

ಇ-ಸಂಖ್ಯೆ: AGRI/18/AUB/2023

**(ಎನ್. ಚಲುವರಾಯಸ್ವಾಮಿ)**
ಕೃಷಿ ಸಚಿವರು